**815 ಶ್ರೀ ಹ್ಯಾರಿಸ್ ಎನ್.ಎ** : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವ್ಯಾಪ್ತಿಯಲ್ಲಿ ಬರುವ ವಿವಿಧ ಅಕಾಡೆಮಿಗಳು ಯಾವುವು;

ಆ) ಸದರಿ ಅಕಾಡೆಮಿಗಳು ಸುವ್ಯವಸ್ಥಿತವಾಗಿ ಕಾರ್ಯ ಚಟುವಟಿಕೆಗಳನ್ನು ಕೈಗೊಳ್ಳಲು ಬೇಕಾದ ಮೂಲ ಸೌಕರ್ಯಗಳು ಒದಗಿಸಿಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ.

ಇ) ಸದರಿ ಅಕಾಡೆಮಿಗಳಿಗೆ ಸದಸ್ಯರುಗಳನ್ನು ಆಯ್ಕೆ ಮಾಡುವಾಗ ಅನುಸರಿಸಲಾಗುತ್ತಿರುವ ಮಾನದಂಡಗಳೇನು; ಅವುಗಳನ್ನು ಕಟ್ಟುನಿಟ್ಟಾಗಿ ಅನುಸರಿಸಲಾಗುತ್ತಿದೆಯೇ; ಸದಸ್ಯರುಗಳಿಗೆ ವಿಧಿಸಲಾಗಿರುವ ವಯೋಮಿತಿ ಎಷ್ಟು?

**ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು)** :

ಅ)

1) ಕರ್ನಾಟಕ ಸಂಗೀತ ಮತ್ತು ನೃತ್ಯ ಅಕಾಡೆಮಿ, ಬೆಂಗಳೂರು.
2) ಕರ್ನಾಟಕ ನಾಟಕ ಅಕಾಡೆಮಿ, ಬೆಂಗಳೂರು.
3) ಕರ್ನಾಟಕ ಲಲಿತಾಕಲಾ ಅಕಾಡೆಮಿ, ಬೆಂಗಳೂರು.
4) ಕರ್ನಾಟಕ ಜಾನಪದ ಅಕಾಡೆಮಿ, ಬೆಂಗಳೂರು.
5) ಕರ್ನಾಟಕ ಸಾಹಿತ್ಯ ಅಕಾಡೆಮಿ, ಬೆಂಗಳೂರು.
6) ಕರ್ನಾಟಕ ಉರ್ದು ಅಕಾಡೆಮಿ, ಬೆಂಗಳೂರು.
7) ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿ, ಬೆಂಗಳೂರು.
8) ಕರ್ನಾಟಕ ಶಿಲ್ಪಕಲಾ ಅಕಾಡೆಮಿ, ಬೆಂಗಳೂರು.
9) ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿ, ಮಂಗಳೂರು.
10) ಕರ್ನಾಟಕ ಕೊಡವ ಅಕಾಡೆಮಿ, ಮಡಿಕೇರಿ.
11) ಕರ್ನಾಟಕ ಬ್ಯಾರಿ ಅಕಾಡೆಮಿ, ಮಂಗಳೂರು
12) ಕರ್ನಾಟಕ ಯಕ್ಷಗಾನ ಅಕಾಡೆಮಿ, ಬೆಂಗಳೂರು.

ಆ) 12 ಅಕಾಡೆಮಿಗಳು ಅವುಗಳ ಸಿಬ್ಬಂದಿ ವೇತನ, ಹಾಗೂ ಕಾರ್ಯ ಚಟುವಟಿಕೆಗಳಿಗೆ ಸಮಾನವಾಗಿ ಅನುದಾನ ನೀಡಿಕೆ. ಕಾರ್ಯ ನಿರ್ವಹಿಸಲು ಸ್ಥಳ ಮತ್ತು ಕಛೇರಿ ಸೌಲಭ್ಯ ಕಲ್ಪಿಸಲಾಗಿದೆ.

ಇ) ಆಯಾ ಕ್ಷೇತ್ರದಲ್ಲಿ ನುರಿತ ಪರಿಣಿತರನ್ನು ಸದಸ್ಯರನ್ನಾಗಿ ಆಯ್ಕೆ ಮಾಡಲಾಗುತ್ತದೆ. ಇದಕ್ಕೆ ವಯಸ್ಸಿನ ಮಿತಿ ಇರುವುದಿಲ್ಲ. ಸದಸ್ಯರಾಗಲು ಅರ್ಹತೆ ಮಾತ್ರ ಆಧಾರವಾಗಿರುತ್ತದೆ. ಬೇರೆ ಮಾನದಂಡ ಇರುವುದಿಲ್ಲ.

**633 ಶ್ರೀ ರುದ್ರೇಶಗೌಡ ವೈ. ಎನ್. (ಬೇಲೂರು)** : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನ ಜಿಲ್ಲೆ ಮಲೆನಾಡು ಪ್ರದೇಶವಾದ ಬೇಲೂರು, ಸಕಲೇಶಪುರ ಮತ್ತು ಅರಕಲಗೂಡು ತಾಲ್ಲೂಕಿನಲ್ಲಿ ಇತ್ತೀಚೆಗೆ ಬಿದ್ದ ಮಳೆಯಿಂದಾಗಿ ಲೋಕೋಪಯೋಗಿ ಇಲಾಖೆ ಹಾಗೂ ಗ್ರಾಮೀಣ ರಸ್ತೆಗಳು ಹಾಳಾಗಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

ಆ) ಹೀಗೆ ಹಾಳಾಗಿರುವ ರಸ್ತೆಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಹಾಳಾದ ರಸ್ತೆಗಳ ದುರಸ್ತಿಗೆ ಸರಕಾರ ತುರ್ತಾಗಿ ಅನುದಾನ ಬಿಡುಗಡೆ ಮಾಡುವುದೇ?

**ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು)** :

ಅ) ಹಾಸನ ಜಿಲ್ಲೆ ಮಲೆನಾಡು ಪ್ರದೇಶವಾದ ಬೇಲೂರು, ಸಕಲೇಶಪುರ ಮತ್ತು ಅರಕಲಗೂಡು ತಾಲ್ಲೂಕಿನಲ್ಲಿ ಇತ್ತೀಚೆಗೆ ಬಿದ್ದ ಮಳೆಯಿಂದಾಗಿ ಲೋಕೋಪಯೋಗಿ ಇಲಾಖೆ ವ್ಯಾಪ್ತಿಯ ರಾಜ್ಯ ಹೆದ್ದಾರಿಗಳು ಜಾಗೂ ಜಿಲ್ಲಾ ಮುಖ್ಯ ರಸ್ತೆಗಳ ಹಲವು ಭಾಗಗಳು ಹಾಳಾಗಿರುವುದು ಸರಕಾರದ ಗಮನಕ್ಕೆ ಬಂದಿರುತ್ತದೆ.

ಗ್ರಾಮೀಣ ರಸ್ತೆಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಗೆ ಒಳಪಡುತ್ತವೆ.

ಆ) ಬೇಲೂರು ತಾಲ್ಲೂಕಿನ ಲೋಕೋಪಯೋಗಿ ರಸ್ತೆಗಳ ಅಭಿವೃದ್ಧಿಗಾಗಿ ರೂ.1026.91 ಲಕ್ಷಗಳನ್ನು, ಸಕಲೇಶಪುರ ತಾಲ್ಲೂಕಿನ ರಸ್ತೆಗಳ